ಸರ್ಕಾರ ಕೈಗೊಂಡ ಕ್ರಮಗಳೇನು? (ಪಟ್ಟಿ ನೀಡುವುದು)

ಶ್ರೀ ಎಚ್.ಕೆ.ಪಾಟೀಲ್ (ಜಲಸಂಪನ್ಮೂಲ ಸಚಿವರು):

ಅ. ವಿದ್ಯುಚ್ಛಕ್ತಿ ಒದಗಿಸಲು ಆದ ವಿಳಂಬದಿಂದಾಗಿ ಈ ಕಾಮಗಾರಿಗಳು ಪೂರ್ಣಗೊಳ್ಳಲು ವಿಳಂಬವಾಗಿದೆ.

ಆ. ಈ ಯೋಜನೆಯನ್ನು 1984-85ನೇ ಸಾಲಿನಲ್ಲಿ ಕೈಗೆತ್ತಿಕೊಳ್ಳಲಾಯಿತು. ಜೂನ್-01ರವರೆಗೆ ರೂ.5.24 ಕೋಟಿ ಹಣವನ್ನು ಖರ್ಚು ಮಾಡಲಾಗಿದೆ. ಆಗಸ್ಟ್-2001ರ ಅಂತ್ಯದ ವೇಳೆಗೆ ಪೂರ್ಣಗೊಳಿಸಲಾಗುವುದು. ಈ ಯೋಜನೆಗೆ ಬೇಕಾಗುವ ವಿದ್ಯುತ್ ಸರಬರಾಜಿಗಾಗಿ ಸರ್ಕಾರವು ಕೆ.ಪಿ.ಟಿ.ಸಿ.ಎಲ್. ಸಂಸ್ಥೆಯೊಂದಿಗೆ ಚರ್ಚಿಸಿ ಪೂರ್ಣ ಮೊತ್ತವನ್ನು ಸಂದಾಯ ಮಾಡಲಾಗಿರುತ್ತದೆ.

ಕೊಡಗು ಜಿಲ್ಲೆಯಲ್ಲಿ ಸಣ್ಣ ನೀರಾವರಿ ಇಲಾಖೆಯ ಕಾಮಗಾರಿಗಳು.

2980(3512)

ಶ್ರೀ ಅಪ್ಪಚ್ಚು ರಂಜನ್ ಎಂ.ಪಿ.(ಸೋಮವಾರಪೇಟೆ): ಮಾನ್ಯ ಸಣ್ಣ ನೀರಾವರಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) 2000-2001ನೇ ಸಾಲಿನಲ್ಲಿ ಕರ್ನಾಟಕ ರಾಜ್ಯದಲ್ಲಿ ಎಷ್ಟು ವೆಚ್ಚದಲ್ಲಿ ಸಣ್ಣ ನೀರಾವರಿ ಇಲಾಖೆಯ ಕಾಮಗಾರಿ ಕೈಗೊಳ್ಳಲಾಗಿದೆ?

ಆ) ಕೊಡಗು ಜಿಲ್ಲೆಯಲ್ಲಿ ಎಷ್ಟು ವೆಚ್ಚದ ಸಣ್ಣ ನೀರಾವರಿ ಕಾಮಗಾರಿ ಕೈಗೊಳ್ಳಲಾಗಿದೆ? (ತಾಲ್ಲೂಕುವಾರು ವಿವರ ಕೊಡುವುದು)

ಶ್ರೀ ಎಸ್.ಕುಮಾರ್ ಬಂಗಾರಪ್ಪ (ಸಣ್ಣ ನೀರಾವರಿ ರಾಜ್ಯ ಸಚಿವರು):

ಅ) 2000-01 ಸಾಲಿನಲ್ಲಿ ರಾಜ್ಯದ ಸಣ್ಣ ನೀರಾವರಿ ಕಾಮಗಾರಿಗಳಿಗಾಗಿ 12,796.13 ಲಕ್ಷ ರೂ. ವೆಚ್ಚ ಮಾಡಲಾಗಿದೆ.

ಆ) 2000-01ನೇ ಸಾಲಿನಲ್ಲಿ ಕೊಡಗು ಜಿಲ್ಲೆಯಲ್ಲಿ ಸಣ್ಣ ನೀರಾವರಿ ಕಾಮಗಾರಿಗಳಿಗಾಗಿ ರೂ.143.03 ಲಕ್ಷ ವೆಚ್ಚ ಮಾಡಲಾಗಿದೆ. ತಾಲ್ಲೂಕುವಾರು ವಿವರಗಳನ್ನು ಅನುಬಂಧದಲ್ಲಿ ನೀಡಲಾಗಿದೆ.

ಅನುಬಂಧ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:3512

(ಲಕ್ಷ ರೂ.ಗಳಲ್ಲಿ)

ಕ್ರ. ಸಂ.	ತಾಲ್ಲೂಕು	ಕೈಗೊಂಡ ಸಣ್ಣ ನೀರಾವರಿ ಕಾಮಗಾರಿಗಳ ಸಂಖ್ಯೆ	ಅಂದಾಜು ಮೊತ್ತ	ಅನುದಾನ	2000-01 ನೇ ಸಾಲಿನಲ್ಲಿ ಆದ ವೆಚ್ಚ
1.	ಮಡಿಕೇರಿ	17	93.85	13.18	3.36
2.	ಸೋಮವಾರಪೇಟೆ	79	356.45	36.23	98.24
3.	ವಿರಾಜಪೇಟೆ	48	305.60	35.80	41.43
	ಒಟ್ಟು	**144**	**755.90**	**85.21**	**143.03**